## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 333 (2601)
2. ಸದಸ್ಯರ ಹೆಸರು : ಶ್ರೀ ನಸೀರ್ ಅಹಮದ್ (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 24.03.2022
4. ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ.ಸಂ: | ಪ್ರಶ್ನೆ | ಉತ್ತರ |
|---|---|---|
| ಅ | ಕರ್ನಾಟಕ ಲೋಕಸೇವಾ ಆಯೋಗದಿಂದ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ಮುಖ್ಯ ಪರೀಕ್ಷೆಗೆ ಹಾಜರಾದ 2008,2010,2014ರ ಬ್ಯಾಚ್‌ಗಳ ಅಭ್ಯರ್ಥಿಗಳ ಮುಖ್ಯ ಪರೀಕ್ಷೆಯ ಉತ್ತರ ಪತ್ರಿಕೆಗಳ ಪ್ರತಿಗಳನ್ನು ಮಾಹಿತಿ ಹಕ್ಕು ಕಾಯಿದೆ ಅಡಿ ಅವರ ಕೋರಿಕೆಯ ಮೇರೆಗೆ ನೀಡಿರುವುದು ನಿಜವೇ; | ಕರ್ನಾಟಕ ಲೋಕಸೇವಾ ಆಯೋಗ ನೀಡಿದ ಮಾಹಿತಿಯಂತೆ,<br>ಹೌದು. |
| ಆ | ಹಾಗಿದ್ದಲ್ಲಿ, 2015ನೇ ಬ್ಯಾಚ್ ನ ಅಭ್ಯರ್ಥಿಗಳ ಮುಖ್ಯ ಪರೀಕ್ಷೆಯ ಉತ್ತರ ಪತ್ರಿಕೆಗಳನ್ನು ಮಾಹಿತಿ ಹಕ್ಕಿನಡಿ ನೀಡಲು ಮಾಹಿತಿ ಆಯೋಗಕ್ಕೆ ರಾಜ್ಯದ ಉಚ್ಚ ನ್ಯಾಯಾಲಯವು ತೀರ್ಪು ನೀಡಿದ್ದರೂ, ಮಾಹಿತಿ ನೀಡದೇ ಮೇಲ್ಮನವಿಯನ್ನು ವಿಭಾಗೀಯ ಪೀಠದ ಮುಂದೆ ಸಲ್ಲಿಸಿರುವುದು ನಿಜವೇ; | ಕರ್ನಾಟಕ ಲೋಕಸೇವಾ ಆಯೋಗ ನೀಡಿದ ಮಾಹಿತಿಯಂತೆ,<br>ಹೌದು. |
| ಇ | ಇದರಿಂದ ಪಾರದರ್ಶಕತೆ ಕಾಯ್ದುಕೊಳ್ಳಲು ಸಾಧ್ಯವಿದೆಯೇ; | ಕರ್ನಾಟಕ ಲೋಕಸೇವಾ ಆಯೋಗ ನೀಡಿದ ಮಾಹಿತಿಯಂತೆ,<br>ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲ್ ಸಂಖ್ಯೆ: 6159-6162/2013, ದಿನಾಂಕ: 20.02.2018ರ ಆದೇಶದನುಸಾರ ಕೇಂದ್ರ ಲೋಕಸೇವಾ ಆಯೋಗದಲ್ಲಿಯೂ ಅಭ್ಯರ್ಥಿಗಳಿಗೆ ಉತ್ತರ ಪತ್ರಿಕೆಗಳ ಪ್ರತಿಗಳನ್ನು ನೀಡುತ್ತಿಲ್ಲ. ಸದರಿ ಆದೇಶದನುಸಾರ ಕರ್ನಾಟಕ ಲೋಕಸೇವಾ ಆಯೋಗವು ಸಹ ನಿರ್ಧರಿಸಿದ್ದು, ಅಭ್ಯರ್ಥಿಗಳಿಗೆ ಮುಖ್ಯ ಪರೀಕ್ಷೆಯ ಉತ್ತರ ಪತ್ರಿಕೆಗಳನ್ನು ಮಾಹಿತಿ ಹಕ್ಕಿನಡಿ ನೀಡಲಾಗುತ್ತಿಲ್ಲ.<br>ಮುಂದುವರೆದು, ಗೆಜೆಟೆಡ್ ಪ್ರೊಬೇಷನರ್ಸ್-2015ನೇ ಸಾಲಿನ ಅಭ್ಯರ್ಥಿಗಳ ಮುಖ್ಯ ಪರೀಕ್ಷೆಯ ಉತ್ತರ ಪತ್ರಿಕೆಗಳನ್ನು ಮಾಹಿತಿ ಹಕ್ಕಿನಡಿ ನೀಡಲು ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಪಿಟಿಷನ್ ಸಂಖ್ಯೆ: 8676/2020ರಲ್ಲಿ ನಿರ್ದೇಶಿಸಿರುತ್ತದೆಯಾದರೂ, ಸದರಿ ಆದೇಶದ |
| ಈ | ಇದರಿಂದ ಅಭ್ಯರ್ಥಿಗಳು ನ್ಯಾಯಾಲಯಗಳಲ್ಲಿ ಅಲೆಯುವಂತೆ ಮಾಡುತ್ತಿಲ್ಲವೇ; | |
| ಉ | ವಿಭಾಗೀಯ ಪೀಠದ ಮುಂದೆ ಇರುವ ಮೇಲ್ಮನವಿಯನ್ನು ವಾಪಸ್ ಪಡೆದು ಉತ್ತರ ಪತ್ರಿಕೆಗಳ ಪ್ರತಿಗಳನ್ನು ಅಭ್ಯರ್ಥಿಗಳಿಗೆ ನೀಡಿ, ಮಾಹಿತಿ ಹಕ್ಕು ಕಾಯಿದೆಯನ್ನು ಅನುಷ್ಠಾನಗೊಳಿಸಲು ಇರುವ ತೊಂದರೆಗಳೇನು? | |



Generated from eOffice by G JAGADEESHA, CMO-JS(GJ), JOINT SECREATRY, CMO on 22/03/2022 06:28 PM

| | | |
|---|---|---|
| | | ವಿರುದ್ಧ ಆಯೋಗವು ರಿಟ್ ಅಪೀಲ್ ಸಂಖ್ಯೆ: 491/2020(ವಿನಯ್ ಕುಮಾರ್ ರಾಮಯ್ಯ) ಯನ್ನು ದಾಖಲಿಸಿದ್ದು, ಸದರಿ ಪ್ರಕರಣದಲ್ಲಿ ಮಾನ್ಯ ಉಚ್ಛ ನ್ಯಾಯಾಲಯದ ವಿಭಾಗೀಯ ಪೀಠವು ತಡೆಯಾಜ್ಞೆ ನೀಡಿರುತ್ತದೆ ಹಾಗೂ ಪ್ರಕರಣವು ವಿಚಾರಣಾ ಹಂತದಲ್ಲಿರುತ್ತದೆ. |

ಸಂಖ್ಯೆ: ಸಿಆಸುಇ 41 ಎಸ್‌ಎಸ್‌ಸಿ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ



Generated from eOffice by G JAGADEESHA, CMO-JS(GJ), JOINT SECREATRY, CMO on 22/03/2022 06:28 PM